**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 1127/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.01**

**ದಿನಾಂಕಃ** 05.11.2025 **ಸಿಡಬ್ಲ್ಯೂ.01**

| | |
|---|---|
| ಹೆಸರು | ಆಸ್ಮಾ ಬಾನು |
| ಗಂಡನ ಹೆಸರು | ಸೈಯದ್ ಅಪ್ಸಲ್ |
| ವಯಸ್ಸು | 39 ವರ್ಷ |
| ಉದ್ಯೋಗ | ಗೃಹಿಣಿ |
| ವಾಸ ಸ್ಥಳ | ಗುತ್ತೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.2 ಮತ್ತು 3 ರವರ ಪರಿಚಯವಿದೆ. ಚಾಸಾ.4 ನನ್ನ ಅತ್ತೆ. ಚಾಸಾ.5 ನನ್ನ ಗಂಡ. ಆರೋಪಿತರ ಪರಿಚಯವಿದೆ. ಆರೋಪಿತರು ನಮ್ಮ ಮನೆಗೆ ಅಕ್ರಮವಾಗಿ ಪ್ರವೇಶ ಮಾಡಿಲ್ಲ. ಯಾವುದೇ ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ. ಯಾವುದೇ ರೀತಿಯ ಹಲ್ಲೆ ಮಾಡಿರುವುದಿಲ್ಲ. ಯಾವುದೇ ಪ್ರಾಣ ಬೆದರಿಕೆ ಹಾಕಿರುವುದಿಲ್ಲ. ನಾನು ವೈದ್ಯರಿಂದ ಯಾವುದೇ ಚಿಕಿತ್ಸೆ ಪಡೆದಿರುವುದಿಲ್ಲ. ನನ್ನ ಗಂಡ ಮತ್ತು ಆರೋಪಿತರ ನಡುವೆ ಹಣಕಾಸಿನ ವಿಚಾರವಾಗಿ ತಕರಾರು ಇದ್ದುದರಿಂದ ನಾನು ಆರೋಪಿತರಿಗೆ ಬುದ್ದಿ ಕಲಿಸುವ ಸಲುವಾಗಿ ಠಾಣೆಗೆ ಹೋದಾಗ ಪೊಲೀಸರು ಕೆಲವು ದಾಖಲೆಗಳಿಗೆ ನನ್ನ ಸಹಿ ಪಡೆದಿರುತ್ತಾರೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಠಾಣೆಗೆ ನೀಡಿದ ದೂರು ಆಗಿದ್ದು ಅದನ್ನು ನಿಪಿ.1 ಎಂದು ಸಾಕ್ಷಿಯ ಸಹಿಯನ್ನು ನಿಪಿ.1 (ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದು ಸ್ಥಳ ಪಂಚನಾಮೆ ಆಗಿದ್ದು ಅದನ್ನು ನಿಪಿ.2 ಎಂದು ಸಾಕ್ಷಿಯ ಸಹಿಯನ್ನು ನಿಪಿ.2 (ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಫೋಟೋ ತೋರಿಸಲಾಗಿ ಅದರಲ್ಲಿ ತಾನು ಇರುವುದಾಗಿ ಒಪ್ಪಿರುತ್ತಾರೆ. ಸದರಿ ಛಾಯ ಚಿತ್ರವನ್ನು ನಿಪಿ.3 ಎಂದು ಗುರುತಿಸಲಾಯಿತು. ನಿಪಿ.3 ನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರಿಗೆ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 20.12.2023 ರಂದು ಮಧ್ಯಾಹ್ನ 12.00 ಗಂಟೆ ಸಮಯದಲ್ಲಿ ನಾನು ಒಬ್ಬಳೇ ಮನೆಯಲ್ಲಿ ಇದ್ದಾಗ ಆರೋಪಿತರು ನಮ್ಮ ಮನೆಗೆ ಅಕ್ರಮವಾಗಿ ಪ್ರವೇಶ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಕಾಲಕ್ಕೆ ಆರೋಪಿತರು ತಮ್ಮ ಕೈಕಾಲುಗಳಿಂದ ನನ್ನ ಮೇಲೆ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಮನೆಯಲ್ಲಿ ನನ್ನ ಗಂಡನನ್ನು ಹುಡುಕುತ್ತಾ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ. ಹಣ ಕೊಡದಿದ್ದರೆ ನಿನ್ನ ಗಂಡನನ್ನು ಕೊಲೆ ಮಾಡುತ್ತೇವೆ ಎಂದು ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಹಲ್ಲೆಯಿಂದ ನಾನು ಸರ್ಕಾರಿ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ದಿಃ 21.12.2023 ರಂದು ನಾನು ಆರೋಪಿತರ ವಿರುದ್ಧ ನಿಪಿ.1 ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ. ದೂರು ನೀಡಿದ ನಂತರ ಪೊಲೀಸರು ಸ್ಥಳಕ್ಕೆ ಬಂದು ನಿಪಿ.2 ರಂತೆ ಸ್ಥಳ ಪಂಚನಾಮೆ ಜರುಗಿಸಿ, ನಿಪಿ.3 ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಗುರುತಿಸಲು ನಿರಾಕರಿಸಿದ ಹೇಳಿಕೆಯನ್ನು ನಿಪಿ.4 ಎಂದು ಗುರುತಿಸಲಾಯಿತು. ನಾನು ಆರೋಪಿತರೊಂದಿಗೆ ರಾಜಿ ಆಗಿದ್ದೇನೆ ಎಂದರೆ ಸರಿ. ಆದ್ದರಿಂದ ಆರೋಪಿತರಿಗೆ ಶಿಕ್ಷೆ ಆಗಬಾರದು ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ